**Akashavni: Bangalore**
**Regional News In Kannada**
**11.07.2025 / 2.30pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

**ಮುಖ್ಯಾಂಶಗಳು :**

1. ಚಿಕ್ಕಮಗಳೂರು-ಬೆಂಗಳೂರು-ತಿರುಪತಿ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಹಸಿರು ನಿಶಾನೆ
2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಾಳೆ ರಾಷ್ಟ್ರೀಯ ಲೋಕ ಅದಾಲತ್
3. ಇಂದು ವಿಶ್ವ ಜನಸಂಖ್ಯಾ ನಿಯಂತ್ರಣ ದಿನಾಚರಣೆ: ಜನರಲ್ಲಿ ಅರಿವು ಮೂಡಿಸಲು ಜಾಗೃತಿ ಜಾಥಾ
4. ಮೂರನೇ ಆಷಾಡ ಶುಕ್ರವಾರ ಹಿನ್ನಲೆ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಹರಿದುಬಂದ ಭಕ್ತಸಾಗರ

***************

ಚಿಕ್ಕಮಗಳೂರು-ಬೆಂಗಳೂರು-ತಿರುಪತಿ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ಚಿಕ್ಕಮಗಳೂರು ರೈಲು ನಿಲ್ದಾಣದಲ್ಲಿ ಹಸಿರು ನಿಶಾನೆ ತೋರಿದರು. ಇದಕ್ಕು ಮುನ್ನ ಸಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ರೈಲ್ವೆ ಇಲಾಖೆಯಲ್ಲಿ ಹಲವು ಕ್ರಾಂತಿಕಾರಕ ಕ್ರಮ ಕೈಗೊಂಡಿದ್ದಾರೆ. ಅದರ ಭಾಗವಾಗಿ ಹಲವು ದಶಕದ ಕನಸಾಗಿದ ಚಿಕ್ಕಮಗಳೂರು-ತಿರುಪತಿ ರೈಲು ಸಂಚಾರಕ್ಕೆ ಇಂದು ಚಾಲನೆ ನೀಡಲಾಗಿದೆ ಎಂದರು. ಚಿಕ್ಕಮಗಳೂರು-ಬೇಲೂರು-ಹಾಸನ ರೈಲು ಮಾರ್ಗಕ್ಕೆ ಹಳಿ ಹಾಕುವ ಕಾರ್ಯ ಪ್ರಗತಿಯಲ್ಲಿದ್ದು, ಇನ್ನು ಎರಡೂವರೆ ವರ್ಷದಲ್ಲಿ ಚಿಕ್ಕಮಗಳೂರು-ಹಾಸನ ರೈಲು ಸಂಚಾರ ಆರಂಭಗೊಳ್ಳಲಿದೆ. ಅಲ್ಲದೇ ಶಿವಮೊಗ್ಗ-ಶೃಂಗೇರಿ-ಮಂಗಳೂರು ನೂತನ ರೈಲು ಮಾರ್ಗಕ್ಕೆ ಸರ್ವೆ ಕಾರ್ಯ ನಡೆಸಲು ತೀರ್ಮಾನಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಕರ್ನಾಟಕದಲ್ಲಿ ೧ ಸಾವಿರದ ೯೮೧ ಕೋಟಿ ರೂಪಾಯಿಗಳ ವೆಚ್ಚದಲ್ಲಿ ೭೧ ರೈಲ್ವೆ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲಾಗಿದೆ ಎಂದು ಸಚಿವ ವಿ.ಸೋಮಣ್ಣ ಹೇಳಿದರು.

**ಧ್ವನಿ : ವಿ.ಸೋಮಣ್ಣ ( ೩೦ ಸೆಕೆಂಡ್‌ಗಳು)**

ಕಾರ್ಯಕ್ರಮದಲ್ಲಿ ಸಂಸದ ಕೋಟಾ ಶ್ರೀನಿವಾಸ ಪೂಜಾರಿ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್, ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ ಉಪಸ್ಥಿತರಿದ್ದರು.

****************

ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ನಾಳೆ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ನಟೇಶ್ ಆರ್. ತಿಳಿಸಿದ್ದಾರೆ. ಕೋಲಾರ ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ನಡೆದ 'ದೇಶಕ್ಕಾಗಿ ೯೦ ದಿನಗಳ ಮಧ್ಯಸ್ಥಿಕೆ' ವಿಶೇಷ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ನಾಲ್ಕು ಬಾರಿ ರಾಷ್ಟ್ರೀಯ ಲೋಕ ಅದಾಲತ್‌ಗಳನ್ನು ನಡೆಸಲಾಗುತ್ತದೆ. ಈಗಾಗಲೇ ಮೊದಲನೇ ಲೋಕ ಅದಾಲತ್ ಕಳೆದ ಮಾರ್ಚ್ ೮ ರಂದು ನಡೆದಿದೆ. ಇದೀಗ ಎರಡನೇ ಲೋಕ ಅದಾಲತ್ ನಾಳೆ ನಡೆಯಲಿದೆ ಎಂದರು. ಕಳೆದ ಬಾರಿಯ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಉಳಿದಿದ್ದ ಪ್ರಕರಣಗಳನ್ನು ನ್ಯಾಯಾಧೀಶರು, ವಕೀಲರು ಹಾಗೂ ಕಕ್ಷಿದಾರರ ಸಹಕಾರದಿಂದ ೬೬ ಸಾವಿರದ ೧೫೪ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದರು. ಲೋಕ ಅದಾಲತ್‌ನಲ್ಲಿ ನುರಿತ ವಕೀಲರು ಸಂಧಾನಕಾರರಾಗಿ ಕಾರ್ಯ ನಿರ್ವಹಿಸಲಿದ್ದಾರೆ. ಜೊತೆಗೆ ಸಮಯವೂ ಉಳಿತಾಯವಾಗಲಿದ್ದು, ಇಲ್ಲಿ ಇತ್ಯರ್ಥವಾದ ಪ್ರಕರಣಗಳಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ ಎಂದು ನ್ಯಾಯಾಧೀಶ ನಟೇಶ್ ಆರ್. ಮಾಹಿತಿ ನೀಡಿದರು.

****************

ದಾವಣಗೆರೆ ಜಿಲ್ಲೆಯ ೨೪ ಕ್ಕೂ ಹೆಚ್ಚು ನ್ಯಾಯಾಲಯಗಳಲ್ಲಿ ನಾಳೆ ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ೧೦ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಶೀಘ್ರ ನ್ಯಾಯದಾನ, ಸಮಯ, ಮತ್ತು ಹಣ ಉಳಿತಾಯದ ಈ ಆಂದೋಲನದ ಪ್ರಯೋಜನವನ್ನು ಕಕ್ಷಿದಾರರು ಪಡದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

****************

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ನಾಳೆ ರಾಷ್ಟ್ರೀಯ ಲೋಕ್ ಅದಾಲತ್  ನಡೆಸಲಾಗುವುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್.ಎನ್.ಹೊಸಮನೆ ತಿಳಿಸಿದ್ದಾರೆ.ಲೋಕ ಅದಾಲತ್‌ನಲ್ಲಿ ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಪ್ರಕರಣಗಳು, ರಾಜೀ ಆಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕಿನ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ, ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ, ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಇಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದರು.

ಸಾರ್ವಜನಿಕರು, ಕಕ್ಷಿದಾರರು ರಾಷ್ಟ್ರೀಯ ಲೋಕ ಅದಾಲತ್ ಪ್ರಯೋಜನವನ್ನು ಪಡೆದು, ತಮ್ಮ ವಿವಾದಗಳನ್ನು ಪರಿಹರಿಸಿಕೊಳ್ಳಬೇಕು ಎಂದು ರಾಜೇಶ್.ಎನ್.ಹೊಸಮನೆ ಮನವಿ ಮಾಡಿದರು.

****************

ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆರೋಗ್ಯ ಕುಟುಂಬ ಇಲಾಖೆ, ಜಿಲ್ಲಾ ಆರೋಗ್ಯ ಅಧಿಕಾರಿಗಳ ಮತ್ತು ತಾಲೂಕು ಅಧಿಕಾರಿಗಳ ಕಾರ್ಯಾಲಯದ ಸಹಯೋಗದೊಂದಿಗೆ ಬಳ್ಳಾರಿಯಲ್ಲಿ ಇಂದು ವಿಶ್ವ ಜನಸಂಖ್ಯಾ ನಿಯಂತ್ರಣ ದಿನಾಚರಣೆಯ ಅಂಗವಾಗಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.  ನಗರದ ವಿವಿಧ ಬೀದಿಗಳಲ್ಲಿ ಜಾಗೃತಿ ಜಾಥಾ ಸಾಗಿತು.  ಭಾರತದ ಜನಸಂಖ್ಯೆಯು ಅತಿ ವೇಗವಾಗಿ ಬೆಳೆಯುತ್ತಿದೆ. ಅದನ್ನು ನಿಯಂತ್ರಿಸಲು ನಾವು ಒಂದು ಸಿದ್ಧಾಂತವೊಂದನ್ನು ರೂಪಿಸಿಕೊಳ್ಳಬೇಕು. ಮಗು ಹೆಣ್ಣಾಗಲಿ ಅಥವಾ ಗಂಡಾಗಲಿ ಒಂದು ಇಲ್ಲವೇ ಎರಡು ಮಗು ಎನ್ನುವ ಸಿದ್ಧಾಂತವನ್ನು ಪಾಲಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ರಮೇಶ್ ಬಾಬು ಪೋಷಕರಿಗೆ ಸಲಹೆ ನೀಡಿದರು.

****************

ಮೂರನೇ ಆಷಾಡ ಶುಕ್ರವಾರ ಹಿನ್ನೆಲೆಯಲ್ಲಿ ನಾಡ ಅಧಿದೇವತೆ ಚಾಮುಂಡೇಶ್ವರಿ ದರ್ಶನಕ್ಕಾಗಿ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭಕ್ತ ಸಾಗರ ಹರಿದು ಬರುತ್ತಿದೆ.  ನಾಡದೇವಿ ಚಾಮುಂಡೇಶ್ವರಿಗೆ ಮುಂಜಾನೆ ೩:೩೦ ಕ್ಕೆ ವಿವಿಧ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯ ನೆರವೇರಿಸಲಾಗಿದ್ದು, ಬೆಳಗ್ಗೆ ೬ ಗಂಟೆಯಿಂದ ಸಾರ್ವಜನಿಕ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಈ

ಬಾರಿ ಚಾಮುಂಡೇಶ್ವರಿಗೆ ಸರ್ಪಾಲಂಕಾರ, ಗಜಾಲಂಕಾರ ಮಾಡಲಾಗಿದ್ದು, ಗಜಲಕ್ಷ್ಮಿ ಅಲಂಕಾರದಲ್ಲಿ ಚಾಮುಂಡೇಶ್ವರಿ ದೇವಿ ಕಂಗೊಳಿಸುತ್ತಿದ್ದು, ರಾಜ್ಯದ ಮೂಲೆ ಮೂಲೆಗಳಿಂದ ಆಗಮಿಸಿರುವ ಭಕ್ತರು, ಸರತಿ ಸಾಲಿನಲ್ಲಿ ನಿಂತು ದೇವಿ ದರ್ಶನ ಪಡೆಯುತ್ತಿದ್ದಾರೆ. ೧ ಸಾವಿರ ರೂಪಾಯಿ, ೩೦೦ ರೂಪಾಯಿ ಟಿಕೆಟ್ ಖರೀದಿ ಮಾಡಿ ಬರುವವರಿಗೆ ಪ್ರತ್ಯೇಕ ದರ್ಶನದ ವ್ಯವಸ್ಥೆ ಮಾಡಲಾಗಿದ್ದು, ಧರ್ಮ ದರ್ಶನ ಹಾಗೂ ಮೆಟ್ಟಿಲುಗಳ ಮೂಲಕವು ಭಕ್ತರು ಬೆಟ್ಟಕ್ಕೆ ಆಗಮಿಸುತ್ತಿದ್ದಾರೆ. ಚಾಮುಂಡಿ ಬೆಟ್ಟಕ್ಕೆ ಖಾಸಗಿ ವಾಹನಗಳನ್ನು ನಿಷೇಧಿಸಿದ್ದು ಲಲಿತ ಮಹಲ್ ಮೈದಾನದಿಂದ ಉಚಿತ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಅಹಿತಕರ ಘಟನೆ ಜರುಗದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ.

****************

ಕೇವಲ ಪೂಜೆ ಮಾಡುವುದರಿಂದ ದೇವರನ್ನು ಪಡೆಯಲು ಸಾಧ್ಯವಿಲ್ಲ. ತಪಸ್ಸಿನ ಜೊತೆಗೆ ಜ್ಞಾನ ಸಂಪಾದಿಸಿದಾಗ ಮಾತ್ರ ಆತನ ಕೃಪೆಗೆ ಪಾತ್ರರಾಗಲು ಸಾಧ್ಯ. ಅದಕ್ಕಾಗಿ ವೇದೋಪನಿಷತ್ತುಗಳು ತೋರಿದ ಮಾರ್ಗದಲ್ಲಿ ನಾವೆಲ್ಲರೂ ನಡೆದುಕೊಂಡಲ್ಲಿ ಮೋಕ್ಷ ಪಡೆಯಬಹುದು ಎಂದು ಉತ್ತರಾದಿ ಮಠದ ಮಠಾಧೀಶರಾದ ಸತ್ಯಾತ್ಮ ತೀರ್ಥರು ಹೇಳಿದ್ದಾರೆ. ಯಾದಗಿರಿ ನಗರದ ಉತ್ತರಾದಿಮಠದ ರಾಘವೇಂದ್ರ ಸ್ವಾಮಿಗಳ ಪರಿಮಳ ಮಂಟಪದಲ್ಲಿ ವಿಶೇಷ ಪೂಜೆಯೊಂದಿಗೆ ಪಂಚಾಮೃತ ಮತ್ತು ಅಷ್ಟೋತ್ತರ ಸಲ್ಲಿಸಿ ನಂತರ ಭಕ್ತರನ್ನುದ್ದೇಶಿಸಿ ಅವರು ಉಪನ್ಯಾಸ ನೀಡಿದರು.ಭಗವಂತನ ನಾಮಸ್ಮರಣೆಯಲ್ಲಿ ಇರುವವರಿಗೆ ಕಷ್ಟದ ಅರಿವು ಬರುವುದಿಲ್ಲ. ಅದಕ್ಕಾಗಿ ಪ್ರತಿಯೊಬ್ಬರು ಧರ್ಮ ಸಂರಕ್ಷಣೆಗೆ ಬದ್ಧರಾಗಿ ಮತ್ತು ಮಕ್ಕಳಿಗೆ ಪರಂಪರೆ, ಸಂಸ್ಕಾರ ಮತ್ತು ಧಾರ್ಮಿಕ ಅರಿವು ಮೂಡಿಸಬೇಕು. ದೈನಂದಿಕ ಕಾರ್ಯದ ಜೊತೆಗೆ ಭಗವಂತನ ಪ್ರಾರ್ಥನೆ ಮಾಡಿ, ಆತನ ಪ್ರೀತಿ ಸಂಪಾದಿಸಿದಲ್ಲಿ, ಮೋಕ್ಷ ಸಾಧಿಸಲು ಸಾಧ್ಯ ಎಂದು ಹೇಳಿದರು.

****************

ಎನ್.ತಿಪ್ಪಣ್ಣ ಅವರು ಇಂದು ವಯೋಸಹಜ ಕಾಯಿಲೆಯಿಂದ ವಿಧಿವಶರಾಗಿದ್ದಾರೆ. ಅವರಿಗೆ ೯೭ ವರ್ಷ ವಯಸ್ಸಾಗಿತ್ತು. ರಾಜ್ಯ ರಾಜಕಾರಣದಲ್ಲಿ ತಮ್ಮ ಮುತ್ಸದ್ದಿತನದಿಂದಲೇ ಜನಮನ್ನಣೆಗಳಿಸಿದ್ದ ಅವರು, ರಾಮಕೃಷ್ಣ ಹೆಗಡೆಯವರೊಂದಿಗೆ ಗುರುತಿಸಿಕೊಂಡು ಜನತಾದಳದಿಂದ ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ, ಪರಾಭವಗೊಂಡಿದ್ದರು. ಬಳಿಕ ಜೆಡಿಯುನಲ್ಲಿದ್ದ ಅವರು ಪಕ್ಷವನ್ನು ಜೆಡಿಎಸ್ ನಲ್ಲಿ ವಿಲೀನಗೊಳಿಸಿ, ರಾಜ್ಯ ಘಟಕದ ಅಧ್ಯಕ್ಷರಾಗಿದ್ದರು. ನಂತರ ವಿಧಾನ ಪರಿಷತ್ ಸದಸ್ಯರಾಗಿದ್ದರು. ಅವರ ನಿಧನಕ್ಕೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

********End********